ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯಲ್ಲಿ ಸ್ಯಾನಿಟರಿ ವರ್ಕರ್ಸ್ ಹುದ್ದೆಗಳಿಗೆ ನಡೆಸಿದ ಸಂದರ್ಶನ

4496 (5317) : ಶ್ರೀ ಆತ್ಮಾನಂದ ಎಂ.ಎಸ್ (ಮಂಡ್ಯ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಇಂದಿರಾ ಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ–ಬೆಂಗಳೂರು–ಇವರು ಸ್ಯಾನಿಟರಿ ವರ್ಕರ್ಸ್ ಹುದ್ದೆಗಳಿಗೆ ಅಕ್ಟೋಬರ್ 2002ರಲ್ಲಿ ಸಮದರ್ಶನ ನಡೆಸಿರುವುದು ನಿಜವೆ;

ಆ) ಹಾಗಿದ್ದಲ್ಲಿ ಸಂದರ್ಶನ ಪ್ರಕ್ರಿಯೆ ನಡೆದು ಒಂಭತ್ತು ತಿಂಗಳಾದರೂ ಈ ವರೆವಿಗೂ ಆಯ್ಕೆಯಾದವರಿಗೆ ನೇಮಕಾತಿ ಆದೇಶಗಳನ್ನು ಕಳುಹಿಸದಿರಲು ಕಾರಣಗಳೇನು;

ಇ) ಈ ಸಂಬಂಧ ಯಾವಾಗ ನೇಮಕಾತಿ ಆದೇಶಗಳನ್ನು ಕಳುಹಿಸಲಾಗುವುದು?

ಡಾ. ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಹೌದು.

ಆ) ಆಯ್ಕೆ ಸಮಿತಿ ಶಿಫಾರಸ್ಸುಗಳನ್ನು ದಿನಾಂಕ: 29.03.2003 ರಂದು ಆಡಳಿತ ಮಂಡಳಿಯ ಮುಂದೆ ಮಂಡಿಸಲಾಗಿತ್ತು. ಆಡಳಿತ ಮಂಡಳಿ ಆಯ್ಕೆ ವಿಧಾನದಲ್ಲಿ ಕೆಲವೊಂದು ಅಂಶಗಳ ಮೇಲೆ ಮಾಹಿತಿ ಕೋರಿದ್ದು, ಮುಂದಿನ ಆಡಳಿತ ಮಂಡಳಿ ಸಭೆಗೆ ಈ ಮಾಹಿತಿಗಳೊಂದಿಗೆ ವಿಷಯವನ್ನು ಮಂಡಿಸಲಾಗುವುದು.

ಇ) ಆಡಳಿತ ಮಂಡಳಿಯು ಮುಂದಿನ ಸಭೆಯಲ್ಲಿ ಕೈಗೊಳ್ಳುವ ನಿರ್ಣಯದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮಂಡ್ಯ ಜಿಲ್ಲಾ ಪಂಚಾಯತ್‌ನಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳು

4497 (5318) : ಶ್ರೀ ಆತ್ಮಾನಂದ ಎಂ.ಎಸ್ (ಮಂಡ್ಯ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ಜಿಲ್ಲಾ ಪಂಚಾಯತ್‌ನಲ್ಲಿ, ಪಿ.ಎಂ.ಜಿ.ಎಸ್.ವೈ. ಹಾಗೂ ನಬಾರ್ಡ್ ಯೋಜನೆಯಡಿ ಕೈಗೊಂಡಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳು ಯಾವುವು: (ವಿಧಾನ ಸಭಾ ಕ್ಷೇತ್ರವಾರು ವಿವರ ನಡುವುದು);

ಆ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಪಿ.ಎಂ.ಜಿ.ಎಸ್.ವೈ. ಹಾಗೂ ನಬಾರ್ಡ್ ಯೋಜನೆಗಳಡಿ ಉದ್ದೇಶಿತ ರಸ್ತೆ ಅಭಿವೃದ್ಧಿ ಕಾಮಗಾರಿಗಳ ವಿವರವೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಪಿ.ಎಂ.ಜಿ.ಎಸ್.ವೈ. ಹಾಗೂ ನಬಾರ್ಡ್ ಯೋಜನೆಯಡಿ ಕೈಗೊಂಡಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಅನುಬಂಧ–Iರಲ್ಲಿ ನೀಡಲಾಗಿದೆ.

ಆ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಪಿ.ಎಂ.ಜಿ.ಎಸ್.ವೈ. ಹಾಗೂ ನಬಾರ್ಡ್ ಯೋಜನೆಯಡಿ ಉದ್ದೇಶಿತ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಅನುಬಂಧ–Iರಲ್ಲಿ ನೀಡಲಾಗಿದೆ.